# ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು : ಶ್ರೀ. ಮಧು ಜಿ.ಮಾದೇಗೌಡ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು)

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 1067

ಉತ್ತರ ದಿನಾಂಕ : 22-09-2022

ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ | ಮಂಡ್ಯ ಜಿಲ್ಲೆಯ ಎಲ್ಲಾ ಗ್ರಾಮಗಳಿಗೂ ಕಾವೇರಿ ನದಿಯಿಂದ ನೀರು ಸರಬರಾಜು ಮಾಡಲು ರೂಪಿಸಲಾಗಿದ್ದ 'ಜಲಧಾರೆ', ಯೋಜನೆಯ ಪ್ರಗತಿ ಯಾವ ಹಂತದಲ್ಲಿದೆ; | ಜಲಧಾರೆ ಯೋಜನೆಯನ್ನು ಜಲ ಜೀವನ ಮಿಷನ್ ಅಡಿಯಲ್ಲಿ ವಿಲೀನಗೊಳಿಸಲಾಗಿದ್ದು, ಮಂಡ್ಯ ಜಿಲ್ಲೆಯ ಎಲ್ಲಾ ಗ್ರಾಮಗಳಿಗೂ ಕಾವೇರಿ ನದಿಯಿಂದ ನೀರು ಸರಬರಾಜು ಮಾಡಲು ಯೋಜನೆಯನ್ನು 2 ಹಂತಗಳಲ್ಲಿ ಅನುಷ್ಠಾನಗೊಳಿಸಲು ಉದ್ದೇಶಿಸಲಾಗಿದ್ದು, ಪ್ರಥಮ ಹಂತದಲ್ಲಿ ಉದ್ದೇಶಿಸಿದ ಯೋಜನೆಯ ಟೆಂಡರ್ ಪರಿಶೀಲನಾ ಹಂತದಲ್ಲಿರುತ್ತದೆ. ಎರಡನೆಯ ಹಂತದಲ್ಲಿ ಉದ್ದೇಶಿಸಿದ ಯೋಜನೆಗಳ ಪ್ರಾಥಮಿಕ ಯೋಜನಾ ವರದಿಗಳು ಪರಿಶೀಲನಾ ಹಂತದಲ್ಲಿರುತ್ತವೆ. |
| ಆ | ಜಲಧಾರೆ ಯೋಜನೆಯನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ; | ಜಲ ಜೀವನ ಮಿಷನ್ ಯೋಜನೆಯಡಿ ಕೈಗೊಂಡ ಸದರಿ ಯೋಜನೆಗಳನ್ನು ಕಾರ್ಯಾದೇಶ ನೀಡಿದ ದಿನಾಂಕದಿಂದ 24 ಮಾಹೆಯೊಳಗೆ ಪೂರ್ಣಗೊಳಿಸಲು ಉದ್ದೇಶಿಸಲಾಗಿರುತ್ತದೆ. |
| ಇ | ಯೋಜನೆಯ ಒಟ್ಟು ಅಂದಾಜು ಮೊತ್ತವೆಷ್ಟು? (ತಾಲ್ಲೂಕುವಾರು ವಿವರ ನೀಡುವುದು). | ಯೋಜನೆಯನ್ನು 2 ಹಂತದಲ್ಲಿ ಅನುಷ್ಠಾನಗೊಳಿಸಲು ಉದ್ದೇಶಿಸಲಾಗಿದ್ದು, ಪ್ರಥಮ ಹಂತದಲ್ಲಿ ಕೆ.ಆರ್.ಪೇಟೆ, ನಾಗಮಂಗಲ ಮತ್ತು ಪಾಂಡವಪುರ ತಾಲ್ಲೂಕುಗಳನ್ನು ಒಗ್ಗೂಡಿಸಿ ಉದ್ದೇಶಿಸಿರುವ ಕಾಮಗಾರಿಯ ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ಅದರಂತೆ ಪರಿಷ್ಕೃತ ಅಂದಾಜು ಮೊತ್ತವು **ರೂ.943.00 ಕೋಟಿ**ಗಳಾಗಿರುತ್ತದೆ.<br>ಎರಡನೆಯ ಹಂತದಲ್ಲಿ ಒಟ್ಟು 5 ಕಾಮಗಾರಿಗಳನ್ನು ಉದ್ದೇಶಿಸಲಾಗಿದ್ದು, ಅಂದಾಜು ಮೊತ್ತವು **ರೂ.802.75 ಕೋಟಿ**ಗಳು ಆಗಿರುತ್ತದೆ.<br>ಈ ಪೈಕಿ ಮದ್ದೂರು ಮತ್ತು ಮಂಡ್ಯ ತಾಲ್ಲೂಕುಗಳನ್ನು ಒಗ್ಗೂಡಿಸಿ ಉದ್ದೇಶಿಸಿರುವ 2 ಕಾಮಗಾರಿಗಳ ಅಂದಾಜು ಮೊತ್ತವು **ರೂ.333.60ಕೋಟಿ**ಗಳು ಮತ್ತು **ರೂ.206.65ಕೋಟಿ**ಗಳು ಆಗಿರುತ್ತವೆ. ಶ್ರೀರಂಗಪಟ್ಟಣ ತಾಲ್ಲೂಕಿನಲ್ಲಿ ಉದ್ದೇಶಿಸಿರುವ 2 ಕಾಮಗಾರಿಗಳ ಅಂದಾಜು ಮೊತ್ತವು **ರೂ.29.80ಕೋಟಿ**ಗಳು ಮತ್ತು **ರೂ.53.85ಕೋಟಿ**ಗಳು ಆಗಿದ್ದು, ಮಳವಳ್ಳಿ ತಾಲ್ಲೂಕಿನಲ್ಲಿ ಉದ್ದೇಶಿಸಿರುವ ಕಾಮಗಾರಿಯ ಅಂದಾಜು ಮೊತ್ತವು **ರೂ.178.85 ಕೋಟಿ**ಗಳು ಆಗಿರುತ್ತದೆ. |

ಸಂ:ಗ್ರಾಕುನೀ&ನೈಇ 462 ಗ್ರಾನೀಸ(4)2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ